ಕರ್ನಾಟಕ ಸರ್ಕಾರ

ಸಂಖ್ಯೆ :ಗ್ರಾಅಪ :101: ಸುಗ್ರಾಯೋ:2008

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ 05.03.2009

## ಸುತ್ತೋಲೆ

ವಿಷಯ : 2ನೇ ಮತ್ತು 3ನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯಡಿ ಅಂಗನವಾಡಿ ಕಟ್ಟಡಕ್ಕೆ ಅನುದಾನ ಒದಗಿಸಿಕೊಳ್ಳುವ ಕುರಿತು.

ಉಲ್ಲೇಖ : (1) ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಟಿಪ್ಪಣಿ ಸಂಖ್ಯೆ:ಮಮ ಇ 02 ಕಾ.09 ದಿ:18.02.2009.

ಉಲ್ಲೇಖಿತ ಟಿಪ್ಪಣಿಯಲ್ಲಿ ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರವರು ರಾಜ್ಯದಲ್ಲಿ ಒಟ್ಟಾರೆ 24,000 ಅಂಗನವಾಡಿ ಕಟ್ಟಡಗಳನ್ನು ಕಟ್ಟಲು ಸ್ಥಳ ಲಭ್ಯವಿರುವುದಾಗಿ ತಿಳಿಸಿ ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯು ಕ್ರಮವಹಿಸಬಹುದೆಂದು ಕೋರಿರುತ್ತಾರೆ. ಸುವರ್ಣ ಗ್ರಾಮೋದಯ ಯೋಜನೆಯಡಿ ಆಯ್ಕೆಯಾದ ಗ್ರಾಮಗಳಲ್ಲಿ ಅಂಗನವಾಡಿ ಕಟ್ಟಡ ಕಟ್ಟಲು ಅವಕಾಶ ಕಲ್ಪಿಸಲಾಗಿದೆ. ಆದುದರಿಂದ ಎಲ್ಲಾ ಜಿಲ್ಲಾ ಪಂಚಾಯತ್‌ಗಳು ತಮ್ಮ ವ್ಯಾಪ್ತಿಯಲ್ಲಿ 2ನೇ ಮತ್ತು 3ನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯಡಿ ಆಯ್ಕೆಯಾದ ಗ್ರಾಮಗಳಲ್ಲಿ ಅಂಗನವಾಡಿ ಕಟ್ಟಡ ಅವಶ್ಯಕತೆಯಿದ್ದಲ್ಲಿ, ನಬಾರ್ಡ್ ಸಂಸ್ಥೆಯು ನಿಗದಿಪಡಿಸಿರುವಂತೆ ಕಪ್ಪು ಮಣ್ಣು ಮತ್ತು ಮೃದು ಮಣ್ಣು ಇರುವಂತಹ ಜಿಲ್ಲೆಗಳಲ್ಲಿ ಗರಿಷ್ಠ ರೂ.3.40 ಲಕ್ಷಗಳ ಅನುದಾನ ಒದಗಿಸಿಕೊಳ್ಳತಕ್ಕದ್ದು. ಆಯ್ಕೆಯಾದ ಗ್ರಾಮಗಳಲ್ಲಿ ಸ್ಥಳ ಲಭ್ಯತೆ ಬಗ್ಗೆ ಜಿಲ್ಲಾ ಮಟ್ಟದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಮಾಹಿತಿ ಪಡೆದು ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲು ಕ್ರಮ ವಹಿಸುವುದು.

ನಿರ್ದೇಶಕರು(ಸ್ವಉಕಾ) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ,